RNU AIR DHARWAD

# MARCH 15,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಒಣ ಮೆಣಸಿನಕಾಯಿ ಬೆಲೆಯಲ್ಲಿ ಗಣನೀಯ ಕುಸಿತವಾಗಿದ್ದು, ರೈತರು ಸಂಕಷ್ಟಕ್ಕೀಡಾಗಿದ್ದಾರೆ; ಕೇಂದ್ರ ಸರ್ಕಾರ ಕೂಡಲೇ ಬೆಂಬಲ ಬೆಲೆ ಘೋಷಿಸಿ, ಒಣ ಮೆಣಸಿನಕಾಯಿ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂದು, ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಹಾಗೂ ವಾಣಿಜ್ಯ ಖಾತೆ ಸಚಿವ ಪಿಯೂಷ್ ಗೋಯಲ್ ಅವರಿಗೆ, ಪತ್ರ ಬರೆದಿದ್ದಾರೆ.ಕರ್ನಾಟಕ, ಆಂಧ್ರ ಪ್ರದೇಶ ಹಾಗೂ ತೆಲಂಗಾಣ ರಾಜ್ಯದಲ್ಲಿ, ಹೆಚ್ಚು ಮೆಣಸಿನಕಾಯಿ ಬೆಳೆಯಲಾಗುತ್ತದೆ. ವಿದೇಶಗಳಿಗೂ ರಫ್ತಾಗುತ್ತದೆ.

<><><>

ಧಾರವಾಡ ಜಿಲ್ಲೆಯು ಕಲೆ, ಸಾಹಿತ್ಯ, ಸಂಗೀತ ಕ್ಷೇತ್ರದಲ್ಲಿ ಅಪಾರವಾದ ಸಾಧನೆ ಮಾಡಿದೆ. ಜಿಲ್ಲೆಯ ಕೀರ್ತಿ ವಿಶ್ವದಗಲಕ್ಕೆ ಪಸರುವಲ್ಲಿ ಇಲ್ಲಿನ ದಿಗ್ಗಜ ಕಲಾವಿದರ, ಸಾಧಕರ ಶ್ರಮವಿದೆ ಎಂದು ಜಿಲ್ಲಾಧಿಕಾರಿ ದಿವ್ಯಾ ಪ್ರಭು ಹೇಳಿದರು. ಧಾರವಾಡ ನಗರದ ರಂಗಾಯಣ ಸಾಂಸ್ಕೃತಿಕ ಸಮುಚ್ಚಯದಲ್ಲಿ ಜರುಗಿದ ವಿವಿಧ ರಾಷ್ಟ್ರೀಯ ಟ್ರಸ್ಟ್ ಗಳ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ವಿಶೇಷ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಬೈಟ್: ದಿವ್ಯಾ ಪ್ರಭು 37 ಸೆಕೆಂದುಗಳು

<><><>

ಸ್ವಾತಂತ್ರ್ಯ ಹೋರಾಟಗಾರ, ಹಿರಿಯ ಸಾಹಿತಿ ಹಾಗೂ ವಿದ್ವಾಂಸ ಡಾಕ್ಟರ ಪಂಚಾಕ್ಷರಿ ಹಿರೇಮಠ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಸಂತಾಪ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟಗಾರ, ಬಹುಭಾಷಾ ಪಂಡಿತ ಡಾಕ್ಟರ್ ಪಂಚಾಕ್ಷರಿ ಹಿರೇಮಠ ಅವರ ನಿಧನದ ಸುದ್ದಿ ತಿಳಿದು ದುಃಖವಾಯಿತು. ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ದೇಶ ಸೇವೆಗೈಯ್ಯುವುದರ ಜೊತೆಗೆ ಹಲವು ಸಾಹಿತ್ಯ ಪ್ರಕಾರಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದರು, ಅವರ ಅಗಲಿಕೆಯಿಂದ ನಾಡಿನ ಸಾರಸ್ವತ ಲೋಕ

ಬಡವಾಗಿದೆ ಎಂದಿದ್ದಾರೆ. ಇಂದು ಸಂಜೆ 4.30ಕ್ಕೆ, ಕೊಪ್ಪಳ ಜಿಲ್ಲೆ, ಬಿಸರಹಳ್ಳಿಯಲ್ಲಿ ಪಾರ್ಥಿವ ಶರೀರದ ಅಂತ್ಯಕ್ರಿಯೆ ನೆರವೇರಲಿದೆ.

<><><>

ಉಪ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ, ರಾಜ್ಯದ ಏಳು ವಿಶ್ವವಿದ್ಯಾಲಯಗಳ ಸ್ಥಿತಿಗತಿ ಪರಿಶೀಲನೆಗೆ, ಉಪ ಸಮಿತಿ ರಚಿಸಲಾಗಿದೆ. ವರದಿಯನ್ನು ಸಚಿವ ಸಂಪುಟ ಸಭೆಗೆ ಮಂಡಿಸಿ, ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ಪಡಿಸಿದ್ದಾರೆ. ಬಿಜೆಪಿ ಶಾಸಕ ಸಿ.ಎನ್. ಅಶ್ವತ್ಥನಾರಾಯಣ, ವಿಧಾನಸಭೆಯಲ್ಲಿ ನಿಲುವಳಿ ಸೂಚನೆ ಅಡಿ, ವಿ ೕಯ ಪ್ರಸ್ತಾಪಿಸಿದಾಗ, ಮುಖ್ಯಮಂತ್ರಿ ಪ್ರತಿಕ್ರಿಯಿಸಿ, ಸ್ಪಷ್ಟನೆ ನೀಡಿದರು.

<><><>

ರಾಜ್ಯದಲ್ಲಿ ವಿಶೇಷ ಚೇತನರಿಗೆ, ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆ, ನಿರಾಮಯ ಆರೋಗ್ಯ ವಿಮಾ ಯೋಜನೆ ಹಾಗೂ ಕಾಕ್ಲಿಯರ್ ಇಂಪ್ಲಾಂಟ್ ಯೋಜನೆಗಳು ಜಾರಿಯಲ್ಲಿವೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ, ತಿಳಿಸಿದ್ದಾರೆ. ವಿಧಾನ ಪರಿ ೇತ್‌ನಲ್ಲಿ ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದ ಎಲ್ಲ ಸರ್ಕಾರಿ ಆಸ್ಪತ್ರೆಗಳು ಅಥವಾ ಖಾಸಗಿ ಆಸ್ಪತ್ರೆಗಳಲ್ಲಿ, ಅಂಗವೈಕಲ್ಯ ನಿವಾರಣೆಗೆ ಶಸ್ತ್ರ ಚಿಕಿತ್ಸೆ ಮಾಡಿಸಿಕೊಳ್ಳಲು, 1 ಲಕ್ಷ ರೂಪಾಯಿ ವರೆಗೆ, ಸಹಾಯ ಧನ ನೀಡಲಾಗುತ್ತಿದೆ ಎಂದು ಹೇಳಿದರು.

<><><>

ರಾಜ್ಯದ 14 ಜಿಲ್ಲೆಗಳ ಒಟ್ಟು, 1 ಲಕ್ಷ 48 ಸಾವಿರದ 448 ಹೆಕ್ಟರ್ ಪ್ರದೇಶದ, ತೆಂಗು ಬೆಳೆಗೆ, ಬಿಳಿ ನೊಣದ ಕೀಟ ಬಾಧೆ ಉಂಟಾಗಿದೆ ಎಂದು, ಸಚಿವ ಎಂ.ಬಿ. ಪಾಟೀಲ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ, ಶಾಸಕ ಸಿ.ಬಿ. ಸುರೇಶಬಾಬು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ, ತೋಟಗಾರಿಕಾ ಸಚಿವರ ಪರವಾಗಿ ಅವರು, ಉತ್ತರಿಸಿದರು.

<><><>

ಕರ್ನಾಟಕ ಜಾನಪದ ಅಕಾದೆಮಿ ವತಿಯಿಂದ ಇಂದು ಬೀದರ್ ನ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ವಾರ್ಷಿಕ ಗೌರವ ಪ್ರಶಸ್ತಿ ಪ್ರದಾನ ಸಮಾರಂಭ ಅಯೋಜಿತವಾಗಿದೆ.

<><><>

ಧಾರವಾಡದ ಕರ್ನಾಟಕ ಮಹಾವಿದ್ಯಾಲಯದ ಸೃಜನಾ ರಂಗಮಂದಿರದಲ್ಲಿ ಇಂದು ಸಂಜೆ 5.30 ಕ್ಕೆ, ಜಿ.ಬಿ ಜೋಶಿ ಮೆಮೋರಿಯಲ್ ಟ್ರಸ್ಟ್ ಹಾಗೂ ಪುಣೆಯ ಸ್ವರಮಯಿ ಸಂಸ್ಥೆ ಸಹಭಾಗಿತ್ವದಲ್ಲಿ, ಪದ್ಮವಿಭೂಷಣ ಡಾಕ್ಟರ ಪ್ರಭಾ ಅತ್ರೆ ಸಂಸ್ಮರಣೆ ಕಾರ್ಯಕ್ರಮ ಜರುಗಲಿದೆ.

<><><>

ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ನಗರದ ಚೌಡರೆಡ್ಡಿಪಾಳ್ಯದಲ್ಲಿ, ಜಿಲ್ಲಾ ಆರೋಗ್ಯ ಇಲಾಖೆ ನಿರ್ಮಿಸಿರುವ 'ನಮ್ಮ ಕ್ಲಿನಿಕ್' ಅನ್ನು, ಇಂದು ಉನ್ನತ ಶಿಕ್ಷಣ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಂ.ಸಿ ಸುಧಾಕರ್ ಉದ್ಘಾಟಿಸಲಿದ್ದಾರೆ.

<><><>

**ಇಂದು ಧಾರವಾಡದಲ್ಲಿ ಮತ್ತು 18 ರಂದು ಹುಬ್ಬಳ್ಳಿ ನಗರದಲ್ಲಿ, ರಂಗ ಪಂಚಮಿ ಪ್ರಯುಕ್ತ, ಬೆಳಗ್ಗೆ 6 ಗಂಟೆಯಿಂದ ರಾತ್ರಿ 11ರ ವರೆಗೆ, ಹುಬ್ಬಳ್ಳಿ ಧಾರವಾಡ ಮಧ್ಯದಲ್ಲಿ, ಬಿ.ಆರ್.ಟಿ.ಎಸ್. ಬಸ್ ಸಂಚಾರ ಸ್ಥಗಿತಗೊಳಿಸಲಾಗುವುದು ಎಂದು, ಪ್ರಕಟಣೆ ತಿಳಿಸಿದೆ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>